ಇಲ್ಲವೆಂದು ಕೇಳಿದೆ. ಅಕೌಂಟಬಿಲಿಟಿ ಇದೆ, ಅಕೌಂಟಬಿಲಿಟಿಯನ್ನು ನೀವು ರಾಜಕೀಯ ಇಚ್ಛಾಶಕ್ತಿಯನ್ನು ತೋರಿಸಿ ಕಾರ್ಯಗತ ಮಾಡಬೇಕು, ಹೊಸ ಕಾನೂನು ಎನು ಬೇಕಾಗಿಲ್ಲ, ಈಗಿರುವುದನ್ನೇ ಕಾನ್‌ಫಿಡೆನ್ಸಿಯಲ್ ರಿಪೋರ್ಟ್‌ನಲ್ಲಿ ಬರೆದರೆ ಆಗ ದಾರಿಗೆ ಬರುತ್ತಾರೆ. ಕರ್ನಾಟಕಕ್ಕೆ ಯಾರಿಗೆ ನಿಷ್ಠೆ ಇದೆ, ಕರ್ನಾಟಕದ ಬಗ್ಗೆ ಯಾರಿಗೆ ಪ್ರಾಮಾಣಿಕ ಬದ್ಧತೆ ಇದೆ ಅಂತಹ ಅಧಿಕಾರಿಗಳನ್ನು ಹಾಕತಕ್ಕಂತಹ ರಾಜಕೀಯ ಇಚ್ಛಾಶಕ್ತಿ ಬೇಕಾಗುತ್ತದೆ. ಅದು ಬಹಳ ಪ್ರಮುಖವಾಗಿರುವುದು, ಅದನ್ನು ಮಾಡುವುದಕ್ಕೆ ಪ್ರಯತ್ನ ಮಾಡುತ್ತಿದ್ದೇವೆ ಸ್ವಾಮಿ, ಅಡಚಣೆಗಳಿವೆ ನೋಡೋಣ.

ಇ. ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕೈಗಾರಿಕಾ ಸಚಿವರು) : ಮಾನ್ಯ ಅಧ್ಯಕ್ಷರೆ, ದಿನಾಂಕ : 28.2005ರ 43ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 53 ಪ್ರಶ್ನೆಗಳ ಪೈಕಿ 44 ಉತ್ತರಗಳನ್ನು ತಮ್ಮ ಅನುಮತಿಯನ್ನು ಕೋರಿ ಸದನದಲ್ಲಿ ಮಂಡಿಸುತ್ತಿದ್ದೇನೆ.

ಮಂಡಿಸಲಾಗಿದೆ. (ಅನುಬಂಧ–VII)

ಅಧ್ಯಕ್ಷರು : ಸದನವನ್ನು ನಾಳೆ ಬೆಳಿಗ್ಗೆ 10.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಸಂಜೆ 8 ಗಂಟೆ 38 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ : 03–08–2005ರ ಬೆಳಿಗ್ಗೆ 10.00 ಗಂಟೆಗೆ ಸೇರಲು ತೀರ್ಮಾನಿಸಲಾಯಿತು)

15. ಅನುಬಂಧಗಳು I, II, III, IV, V, VI, VII)

ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2005.

2005ರ ವಿಧಾನಸಭೆಯ ವಿಧೇಯಕ ಸಂಖ್ಯೆ 19

ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ ಅಧಿನಿಯಮ, 1956ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ ಅಧಿನಿಯಮ, 1956ನ್ನು (1957ರ ಕರ್ನಾಟಕ ಅಧಿನಿಯಮ 2) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ: ಇದು ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ. (1) ಈ ಅಧಿನಿಯಮವನ್ನು ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ಅಧಿನಿಯಮ, 2005 ಎಂದು ಕರೆಯತಕ್ಕದ್ದು.

(2)ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.